**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಶಶಿಲ್ ಜಿ ನಮೋಶಿ ಹಾಗೂ ಶ್ರೀ ವೈ.ಎಂ.ಸತೀಶ್, ರವರು ನಿಯಮ 72ರಡಿಯಲ್ಲಿ ನೀಡಿರುವ ಸೂಚನೆಗೆ ಹೇಳಿಕೆ**

## ಸೂಚನೆ

"ರಾಜ್ಯದ ವಿವಿಧ ಇಲಾಖೆಗಳಲ್ಲಿ 500 ಕ್ಕೂ ಹೆಚ್ಚು ಕೆ.ಎ.ಎಸ್. ಪ್ರೊಬೆಷನರಿ ಹುದ್ದೆಗಳು ಖಾಲಿಯಿದ್ದರೂ ಸಹ ಈ ಹುದ್ದೆಗಳನ್ನು ಹಲವು ವರ್ಷಗಳಿಂದ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳದೆ ಕೇವಲ ಬಡ್ತಿ ನೀಡಿ ಈ ಹುದ್ದೆಗಳನ್ನು ತುಂಬಲಾಗುತ್ತಿದೆ. ಅಲ್ಲದೆ ಪಿ.ಸಿ. ಹೋಟಾ ಸಮಿತಿಯ ಶಿಫಾರಸ್ಸಿನಂತೆ ಪ್ರತಿ ವರ್ಷ ಕೇಂದ್ರ ಲೋಕಸೇವಾ ಆಯೋಗದ (ಯು.ಪಿ.ಎಸ್.ಸಿ) ಮಾದರಿಯಲ್ಲಿ ರಾಜ್ಯದಲ್ಲೂ ನೇಮಕಾತಿ ಕ್ಯಾಲೆಂಡರ್ ಅನ್ನು ಬಿಡುಗಡೆ ಮಾಡಿ ಈ ಮೂಲಕ ಕೆ.ಎ.ಎಸ್. ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಬೇಕೆಂದು ಸಾವಿರಾರು ಉದ್ಯೋಗಾಕಾಂಕ್ಷಿಗಳ ಒತ್ತಾಸೆಯಾಗಿರುತ್ತದೆ. ಆದ್ದರಿಂದ ಆ ಹುದ್ದೆಗಳನ್ನು ಕಾಲ ಕಾಲಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳುವ ಬಗ್ಗೆ ಈ ಮೂಲಕ ಸದನದಲ್ಲಿ ಪ್ರಸ್ತಾಪಿಸಿ ಸರ್ಕಾರದ ಗಮನ ಸೆಳೆಯಬಯಸುತ್ತೇನೆ."

****

## ಹೇಳಿಕೆ

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997 ರನ್ವಯ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗಾಗಿ ರಿಕ್ತ ಸ್ಥಾನಗಳ ವಿವರಗಳನ್ನು ನೀಡುವಂತೆ ಸಂಬಂಧಪಟ್ಟ ಆಡಳಿತ ಇಲಾಖೆಗಳನ್ನು ಈಗಾಗಲೇ ಕೋರಲಾಗಿರುತ್ತದೆ.

ಸಂಬಂಧಪಟ್ಟ ಆಡಳಿತ ಇಲಾಖೆಗಳು ಭರ್ತಿಮಾಡಬೇಕಾದ ರಿಕ್ತ ಸ್ಥಾನಗಳನ್ನು ಮೀಸಲಾತಿ ಅನ್ವಯ ಗುರುತಿಸಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ವಿವರಗಳೊಂದಿಗೆ ಪ್ರಸ್ತಾವನೆಯನ್ನು ಕಳುಹಿಸಿಕೊಡಬೇಕಾಗಿರುತ್ತದೆ. ಸ್ವೀಕೃತವಾಗುವ ಮಾಹಿತಿಯನ್ನು ಪರಿಶೀಲಿಸಿ, ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ಮುಂದಿನ ಕ್ರಮಕ್ಕಾಗಿ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಹುದ್ದೆಗಳ ವಿವರಗಳನ್ನು ಬಿಡುಗಡೆಗೊಳಿಸಲಾಗುತ್ತದೆ.

ಸಂಖ್ಯೆ: ಸಿಆಸುಇ 73 ಎಸ್ಎಸ್‌ಸಿ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ